**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 50/2021**

**ಚಾ.ಸಾ. :-2**
**ಪ್ರಾ.ಸಾ. :-3**

| | |
|---|---|
| ಹೆಸರು | : ಉಮೇಶ.ಜಿ.ಎನ್ |
| ತಂದೆಯ ಹೆಸರು | : ಮುದ್ದಲಿಂಗೇಗೌಡ |
| ವಯಸ್ಸು | : 47 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸಸ್ಥಳ | : ಗಣಂಗೂರು ಗ್ರಾಮ |

---

**ಪ್ರಮಾಣೀಕರಿಸಲಾದ ದಿನಾಂಕಃ- 03.11.2025.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ನಾಗೇಶ್ ರವರು ನಮ್ಮ ಊರಿನವರು. ಸುಮಾರು 5 ವರ್ಷಗಳ ಹಿಂದೆ ಅವರಿಗೆ ರಸ್ತೆ ಅಪಘಾತವಾಗಿದ್ದು, ಆ ಸಮಯದಲ್ಲಿ ನಾನು ಮನೆಯಲ್ಲಿದ್ದೆ. ನನಗೆ ಬೇರೆಯವರು ಅವರಿಗೆ ಅಪಘಾತವಾಗಿರುವ ಬಗ್ಗೆ ತಿಳಿಸಿರುತ್ತಾರೆ. ನಂತರ ನಾನು ಮನೆಯಿಂದ ಆಸ್ಪತ್ರೆಗೆ ಹೋಗಿರುತ್ತೇನೆ. ಅಪಘಾತವನ್ನು ನಾನು ನೇರವಾಗಿ ನೋಡಿರುವುದಿಲ್ಲ. ಅಪಘಾತವು ಹೇಗೆ, ಯಾವ ರೀತಿ ಹಾಗೂ ಯಾರ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆ ಎಂಬುದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ದಿನಾಂಕಃ 18.10.2020 ರಂದು ರಾತ್ರಿ 9.20 ರ ಸಮಯದಲ್ಲಿ ನಾನು ನಂಜೇಗೌಡರ ಕ್ಯಾಂಟೀನ್ ಬಳಿ ನಿಂತಿದ್ದಾಗ ಮೃತ ನಾಗೇಶ್ ಹಾಗೂ ಕ್ಯಾಂಟರ್ ನಡುವೆ ಅಪಘಾತವಾಗಿದ್ದು, ನಾನು ಅಪಘಾತವನ್ನು ನೇರವಾಗಿ ನೋಡಿರುತ್ತೇನೆ ಎಂದರೆ ಸುಳ್ಳು. ಆರೋಪಿಯು ತನ್ನ ಕ್ಯಾಂಟರನ್ನು ಅಜಾಗರೂಕತೆಯಿಂದ ಹಾಗೂ ಅತಿವೇಗವಾಗಿ ಚಾಲನೆ ಮಾಡಿ ಡಿಕ್ಕಿಪಡಿಸಿರುತ್ತಾರೆಂದು, ಸದರಿ ಅಪಘಾತವನ್ನು ನಾನು ನೇರವಾಗಿ ನೋಡಿರುತ್ತೇನೆಂದು ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಸಂಪೂರ್ಣ ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ ಎಂದು ನಿರಾಕರಿಸಿದ ಮೇರೆಗೆ ಹೇಳಿಕೆಯನ್ನು ನಿಪಿ-6 ಎಂದು ಗುರುತಿಸಲಾಯಿತು.

ನಂತರ ನಾನು ಪೊಲೀಸ್ ಠಾಣೆಯಲ್ಲಿ ಆರೋಪಿಯನ್ನು ಹಾಗೂ ಟೆಂಪೋವನ್ನು ನೋಡಿ ಗುರುತಿಸುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಇನ್ನೊಂದು ಸಂಪೂರ್ಣ ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ ಎಂದು ನಿರಾಕರಿಸಿದ ಮೇರೆಗೆ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು:</u>** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**